ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **938**

ಸದಸ್ಯರ ಹೆಸರು : ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 12-03-2020

ಉತ್ತರಿಸುವ ಸಚಿವರು : ಮುಖ್ಯಮಂತ್ರಿಗಳು

***

	ಪ್ರಶ್ನೆ	ಉತ್ತರ
ಅ)	ಗಂಗಾ ಕಲ್ಯಾಣ ಯೋಜನೆಯಡಿ ಕೊರೆಸಿರುವ ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕ ನೀಡಲು ವಿವಿಧ ವಿದ್ಯುತ್ ಸರಬರಾಜು ಕಂಪನಿಗಳು ವಿಳಂಬ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ವಿದ್ಯುತ್ ಸರಬರಾಜು ಕಂಪನಿಗಳ ವ್ಯಾಪ್ತಿಯಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಕೊರೆಸಿರುವ ಕೊಳವೆ ಬಾವಿಗಳಿಗೆ ಆದ್ಯತೆಯ ಮೇರೆಗೆ ಗುತ್ತಿಗೆ ಆಧಾರದಲ್ಲಿ ಕಾಮಗಾರಿಗಳನ್ನು ಕೈಗೆತ್ತಿಕೊಂಡು ಯಾವುದೇ ವಿಳಂಬವಿಲ್ಲದೆ ವಿದ್ಯುತ್ ಸಂಪರ್ಕ ನೀಡಲಾಗುತ್ತಿದೆ. ಸ್ಥಳೀಯ ಆಕ್ಷೇಪಣೆಗಳು, ನ್ಯಾಯಾಲಯ ಪ್ರಕರಣಗಳು ಹಾಗೂ ROW ಸಮಸ್ಯೆಗಳಿಂದಾಗಿ ಕೆಲವೆಡೆ ವಿದ್ಯುತ್ ಸಂಪರ್ಕ ಕಲ್ಪಿಸಲು ಸ್ವಲ್ಪ ವಿಳಂಬ ಉಂಟಾಗಿರುತ್ತದೆ. ವಿದ್ಯುತ್ ಸರಬರಾಜು ಕಂಪನಿಗಳ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ನೋಂದಣಿಗೊಂಡ, ವಿದ್ಯುತ್ ಸಂಪರ್ಕ ಕಲ್ಪಿಸಿದ ಹಾಗೂ ಬಾಕಿ ಇರುವ ಅರ್ಜಿಗಳ ವಿವರಗಳು ಕೆಳಕಂಡಂತಿವೆ. ಬಾಕಿಯಿರುವ 6821 ಕೊಳವೆ ಬಾವಿಗಳಿಗೆ ಆದ್ಯತೆ ಮೇಲೆ ವಿದ್ಯುತ್ ಸಂಪರ್ಕ ಕಲ್ಪಿಸಲು ಕ್ರಮ ವಹಿಸಲಾಗಿರುತ್ತದೆ.

ವರ್ಷ	ವರ್ಷದ ಪ್ರಾರಂಭದಲ್ಲಿ ಬಾಕಿ ಇದ್ದ ಅರ್ಜಿಗಳ ಸಂಖ್ಯೆ	ನೋಂದಣಿ ಗೊಂಡ ಅರ್ಜಿಗಳ ಸಂಖ್ಯೆ	ಒಟ್ಟು ಅರ್ಜಿಗಳು	ವಿದ್ಯುತ್ ಸಂಪರ್ಕ ಪಡೆದ ಅರ್ಜಿಗಳ ಸಂಖ್ಯೆ	ಬಾಕಿ ಇರುವ ಅರ್ಜಿಗಳ ಸಂಖ್ಯೆ	ವಿ.ಸ.ಕಂ ವತಿಯಿಂದ ಬಾಕಿ ಇರುವ ಅರ್ಜಿಗಳ ಸಂಖ್ಯೆ	ಅಭಿವೃದ್ಧಿ ನಿಗಮದ ವತಿಯಿಂದ ಬಾಕಿ ಇರುವ ಅರ್ಜಿಗಳ ಸಂಖ್ಯೆ
2016-17	12379	16775	29154	20689	8465	6322	2143
2017-18	8465	22957	31422	23344	8078	7343	735
2018-19	8078	28919	36997	26106	10891	10225	666
2019-20 (ಜನವರಿ-20 ರ ಅಂತ್ಯಕ್ಕೆ	10891	11421	22312	15491	6821	6379	442
ಒಟ್ಟು	**39813**	**80072**	**119885**	**85630**	-	-	-

ಆ)	ನಿಗದಿತ ಸಮಯದಲ್ಲಿ ವಿದ್ಯುತ್ ಸಂಪರ್ಕ ನೀಡಲು ವಿಳಂಬ ಮಾಡುತ್ತಿರುವ ವಿದ್ಯುತ್ ಕಂಪನಿಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮವೇನು?	ವಿದ್ಯುತ್ ಸರಬರಾಜು ಕಂಪನಿಗಳಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಕೊರೆಸಿರುವ ಕೊಳವೆ ಬಾವಿಗಳಿಗೆ ಸಮಗ್ರ ಗುತ್ತಿಗೆ ಆಧಾರದಲ್ಲಿ ಯಾವುದೇ ವಿಳಂಬವಿಲ್ಲದೆ ವಿದ್ಯುತ್ ಸಂಪರ್ಕ ನೀಡಲಾಗುತ್ತಿದೆ. ಈ ವಿಷಯವಾಗಿ ಸದರಿ ಕಾಮಗಾರಿಗಳ ಪ್ರಗತಿಯನ್ನು ಪ್ರತಿ ಮಾಹೆಯ ವಿವಿಧ ಹಂತದ ಮಾಸಿಕ ಪ್ರಗತಿ ಪರಿಶೀಲನಾ ಸಭೆಯಲ್ಲಿ ಪರಿಶೀಲಿಸಿ, ಆದ್ಯತೆಯ ಮೇರೆಗೆ ಕ್ರಮ ವಹಿಸಿ, ಕಾಮಗಾರಿಗಳನ್ನು ಪೂರ್ಣಗೊಳಿಸುವಂತೆ ಎಲ್ಲಾ ವಿದ್ಯುತ್ ಸರಬರಾಜು ಕಂಪನಿಗಳಿಗೆ ನಿರ್ದೇಶಿಸಲಾಗಿರುತ್ತದೆ.

ಸಂಖ್ಯೆ: ಎನರ್ಜಿ 59 ಇಬಿಎಸ್ 2020

ಬಿ.ಎಸ್. ಯಡಿಯೂರಪ್ಪ
(ಬಿ.ಎಸ್.ಯಡಿಯೂರಪ್ಪ)
ಮುಖ್ಯಮಂತ್ರಿ